## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 798 ಬಿಎಂಎಸ್ 2016, ದಿನಾಂಕ:09.11.20216,
2. ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಕನಿಶಾ/ಸಿಆರ್-51/ 2016-17 ದಿನಾಂಕ:26.11.2021.

********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ 2016-17ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿ ಕೈಗೊಂಡಿರುವ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣವನ್ನು ರೂ.335.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಆಯುಕ್ತರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸದರಿ ಪ್ರಸ್ತಾವನೆಯಲ್ಲಿ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಮೆಟ್ರಿಕ್ ನಂತರ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯ ಕಟ್ಟಡದ ಸಿವಿಲ್ ಮತ್ತು ವಿದ್ಯುತ್ ಕಾಮಗಾರಿ, ಸ್ಟ್ರಕ್ಚರಲ್ ಡಿಸೈನ್‌ಗಾಗಿ ಒಟ್ಟು ರೂ.353.13 ಲಕ್ಷಗಳನ್ನು ವೆಚ್ಚ ಮಾಡಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡಿರುವ ರೂ.335.00 ಲಕ್ಷಗಳಿಗಿಂತ ರೂ.18.13 ಲಕ್ಷಗಳು ಹೆಚ್ಚುವರಿಯಾಗಿರುತ್ತದೆ. ಸದರಿ ವಿದ್ಯಾರ್ಥಿನಿಲಯದ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಿ ಇಲಾಖೆಗೆ ಹಸ್ತಾಂತರಿಸಿದ್ದು, ಹೆಚ್ಚುವರಿಯಾಗಿ ತಗಲಿರುವ ರೂ.18.13 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 746 ಬಿಎಂಎಸ್ 2021, ಬೆಂಗಳೂರು, ದಿನಾಂಕ:28-01-2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2016-17ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿ ಕೈಗೊಂಡಿರುವ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯ ಕಟ್ಟಡ ಕಾಮಗಾರಿಗೆ ಹೆಚ್ಚುವರಿಯಾಗಿ ತಗಲಿರುವ ರೂ.18.13 ಲಕ್ಷಗಳ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಇದಕ್ಕೆ ತಗಲುವ ಹೆಚ್ಚುವರಿ ವೆಚ್ಚವನ್ನು 2021-22ನೇ ಸಾಲಿನ ರಾಜ್ಯವಲಯ ಲೆಕ್ಕಶೀರ್ಷಿಕೆ 4225-03-277-2-06 ಅಬ್ಜೆಕ್ಟೀವ್ ಕೋಡ್ 386 ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

28/1/22

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆಯೊಂದಿಗೆ ಹಾಗೂ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheen parveen 28/01/2022

**(ಷಾಹೀನ್ ಪರ್ವೀನ್ ಕೆ )**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು,(ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
4. ಖಜನಾಧಿಕಾರಿಗಳು, ರಾಜ್ಯ ಹುಜುರ್ ಖಜಾನೆ, ಬೆಂಗಳೂರು.
5. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬೆಳಗಾವಿ ಜಿಲ್ಲೆ, ಬೆಳಗಾವಿ
6. ಜಿಲ್ಲಾ ಖಜನಾಧಿಕಾರಿಗಳು . ಬೆಳಗಾವಿ ಜಿಲ್ಲೆ, ಬೆಳಗಾವಿ.
7. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.

**ಪ್ರತಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ, ಕಡತ/ಹೆಚ್ಚುವರಿ ಪ್ರತಿಗಳು.

***********